# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- (1) ಶ್ರೀ ಎಸ್.ಎಂ. ಹುಲಿಯಪ್ಪಗೌಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, (2) ಶ್ರೀ ಹೆಚ್.ನಾಗರಾಜ್ ನಾಯಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು (3) ಶ್ರೀ ಸಿ.ಓ.ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಪಿ.ಎಂ.ಜಿ.ಎಸ್.ವೈ., ಚಿಕ್ಕಮಗಳೂರು ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ ರವರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:-

ಅಪರ ನಿಬಂಧಕರು ವಿಚಾರಣೆಗಳು-01, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪತ ಸಂಖ್ಯೆ: Comp/Uplok/MYS/571/2010/DRE-1 ; Comp/Uplok/MYS/571/2010/DRE-1 ; Comp/Uplok/MYS/571/2010/DRE-1, ದಿನಾಂಕ: 27.06.2013.

<u>ಪ್ರಸ್ತಾವನೆ:</u>

ಮೇಲೆ ಓದಲಾದ ದಿನಾಂಕ: 27.06.2013ರ ಅರೆ ಸರ್ಕಾರಿ ಪತ್ರದಲ್ಲಿ ಅಪರ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು (1) ಶ್ರೀ ಎಸ್.ಎಂ. ಹುಲಿಯಪ್ಪಗೌಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, (2) ಶ್ರೀ ಹೆಚ್.ನಾಗರಾಜ್ ನಾಯಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು (3) ಶ್ರೀ ಸಿ.ಓ.ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಪಿ.ಎಂ.ಜಿ.ಎಸ್.ವೈ., ಚಿಕ್ಕಮಗಳೂರು ಜಿಲ್ಲೆ ಇವರುಗಳ ವಿರುದ್ಧ ಕೈಗೊಂಡ ತನಿಖಾ ವರದಿಯನ್ನು ಹಾಗೂ ಮಾನ್ಯ ಉಪ ಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3)ರಡಿ ನೀಡಿರುವ ವರದಿಯನ್ನು ಕಳುಹಿಸುತ್ತಾ ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯಕ್ತ ಕಾಯ್ದೆ 1984ರ ಸೆಕ್ಷನ್ 12 (3)ರಡಿ ಕಳುಹಿಸಿರುವ ತಮ್ಮ ಮೂಲ ವರದಿಯಲ್ಲಿ (1) ಶ್ರೀ ಎಸ್.ಎಂ. ಹುಲಿಯಪ್ಪಗೌಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, (2) ಶ್ರೀ ಹೆಚ್.ನಾಗರಾಜ್ ನಾಯಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು (3) ಶ್ರೀ ಸಿ.ಓ.ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಪಿ.ಎಂ.ಜಿ.ಎಸ್.ವೈ., ಚಿಕ್ಕಮಗಳೂರು ಜಿಲ್ಲೆ ಇವರುಗಳು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ಅಡಿ ಹಿರೇಮಗಳೂರು – ಅಂಬಲಿ – ಹಾದಿಹಳ್ಳಿ – ಗಂಜಾಲಗೂಡು – ಮತ್ತಿಕೆರೆ ಯಿಂದ ಕೆ.ಆರ್. ಪೇಟೆ ಲಿಂಕ್ ರಸ್ತೆ ನಿರ್ಮಾಣ ಮತ್ತು ಮೇಲ್ವಿಚಾರಣೆ ಕಾಮಗಾರಿಯಲ್ಲಿ ರೂ. 16,11,927/-ಗಳಷ್ಟು ಸರ್ಕಾರದ ಹಣ ನಷ್ಟವಾಗಿದ್ದು, ವಿಚಾರಣಾಧಿಕಾರಿಯವರು ಸ್ಥಳ ಪರಿಶೀಲನೆ ಮಾಡಿ ಸಲ್ಲಿಸಿರುವ ವರದಿಯಲ್ಲಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ದಾಖಲೆ ಮತ್ತು

--2

ವಾಸ್ತಾವಂಶಗಳ ಆಧಾರದನ್ವಯ, ಸದರಿ ಅಧಿಕಾರಿಗಳೆಲ್ಲ ಶ್ರೀ ಎಸ್.ಎಂ.ಹುಲಿಯಪ್ಪಗೌಡ ರವರು ರೂ. 6,04,473-ಗಳಷ್ಟು, ಶ್ರೀ ಹೆಚ್.ನಾಗರಾಜ ನಾಯಕ ರವರು ರೂ. 6,04,473/-ಗಳಷ್ಟು ಮತ್ತು ಶ್ರೀ ಸಿ.ಓ.ನಂದೀಶ್ ರವರು ರೂ. 4,02,981/-ಗಳಷ್ಟು ಸರ್ಕಾರದ ಹಣದ ನಷ್ಟಕ್ಕೆ ಹೊಣೆಗಾರ / ಬಾದ್ಯಸ್ಥರಾಗಿದ್ದು, ಸದರಿ ಅಧಿಕಾರಿಗಳು ಕ.ನಾ.ಸೇವಾ (ನಡತೆ) ನಿಯಮಾವಳಿಗಳು, 1966ರ ನಿಯಮ-3(1)ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ನಿಜವೆಂದು ಕಂಡು ಬಂದಿರುವ ಹಿನ್ನಲೆಯಲ್ಲಿ, ಈ ಅಧಿಕಾರಿಗಳ ವಿರುದ್ಧ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-14(ಎ)ರ ಪ್ರಕಾರ ಕರ್ನಾಟಕ ಉಪಲೋಕಾಯುಕ್ತ ರವರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಅದರಂತೆ, (1) ಶ್ರೀ ಎಸ್.ಎಂ. ಹುಲಿಯಪ್ಪಗೌಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, (2) ಶ್ರೀ ಹೆಚ್.ನಾಗರಾಜ್ ನಾಯಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು (3) ಶ್ರೀ ಸಿ.ಓ.ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಪಿ.ಎಂ.ಜಿ.ಎಸ್.ವೈ., ಚಿಕ್ಕಮಗಳೂರು ಜಿಲ್ಲೆ ಇವರುಗಳ ವಿರುದ್ಧ ಆರೋಪವು ಅಂದರೆ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ಅಡಿ ಹಿರೇಮಗಳೂರು – ಅಂಬಲಿ – ಹಾದಿಹಳ್ಳಿ – ಗಂಜಾಲಗೂಡು – ಮತ್ತಿಕೆರೆಯಿಂದ ಕೆ.ಆರ್. ಪೇಟೆ ಲಿಂಕ್ ರಸ್ತೆ ನಿರ್ಮಾಣ ಮತ್ತು ಮೇಲ್ವಿಚಾರಣೆ ಕಾಮಗಾರಿಯಲ್ಲಿ ರೂ. 16,11,927/-ಗಳಷ್ಟು ಸರ್ಕಾರದ ಹಣ ನಷ್ಟವಾಗಿರುವುದು ಅಪರ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯಕ್ತ, ಬೆಂಗಳೂರು ರವರು ಕೈಗೊಂಡಿರುವ ತನಿಖೆಯಲ್ಲಿ ನಿಜವೆಂದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಪ್ರಕರಣದಲ್ಲಿನ ಅಪಾದಿತ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಹಾಗೂ ಅದಕ್ಕಾಗಿ ವಿವರವಾದ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-14(ಎ)ರ ಪ್ರಕಾರ ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಗ್ರಾಅಪ 16 ಇಎನ್‌ಕ್ಯೂ 2013, ಬೆಂಗಳೂರು,**
**ದಿನಾಂಕ: 27-07-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ (1) ಶ್ರೀ ಎಸ್.ಎಂ. ಹುಲಿಯಪ್ಪಗೌಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, (2) ಶ್ರೀ ಹೆಚ್.ನಾಗರಾಜ್ ನಾಯಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು (3) ಶ್ರೀ ಸಿ.ಓ.ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಪಿ.ಎಂ.ಜಿ.ಎಸ್.ವೈ., ಚಿಕ್ಕಮಗಳೂರು ಜಿಲ್ಲೆ ಇವರುಗಳ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಿ ಇಲಾಖಾ ವಿಚಾರಣೆ ಜರುಗಿಸಲು ಈ ಪ್ರಕರಣವನ್ನು ಕರ್ನಾಟಕ

ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-14(ಎ)ರ ಪ್ರಕಾರ ಕರ್ನಾಟಕ ಉಪಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ;

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1 &2) / (ಆಡಿಟ್).
2. ನಿಬಂಧಕರು, ಕರ್ನಾಟಕ ಉಪಲೋಯುಕ್ತ ಕಚೇರಿ, ಬೆಂಗಳೂರು.
3. ಅಪರ ನಿಬಂಧಕರು ವಿಚಾರಣೆಗಳು-01, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಶೇಷಾದ್ರಿಪುರಂ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು
7. ಸಂಬಂಧಿಸಿದ ಅಧಿಕಾರಿಗಳಿಗೆ - ಮುಕಾಅ, ಜಿ.ಪಂ.ಚಿಕ್ಕಮಗಳೂರು ಇವರ ಮುಖಾಂತರ
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
10. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.